# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಮಂಡ್ಯ.

## ನೇಮಕಾತಿ ಅಧಿಸೂಚನೆ ಸಂಖ್ಯೆ: ಸಿ.ಆರ್.ಆರ್(ಡಿ.ಆರ್)01/2024

## ದಿನಾಂಕ: 25.04.2024.

**ವಿಷಯ:** ಜವಾನರ 41-ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಬಗ್ಗೆ .

**ಉಲ್ಲೇಖ:**

1) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರುರವರ ಪತ್ರ ಸಂಖ್ಯೆ:ಡಿಜೆಎ-II(ಎಲ್.ಸಿ.ಎ- II)128/2012, ದಿನಾಂಕ 27.01.2022.
2) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರುರವರ ಪತ್ರ ಸಂಖ್ಯೆ:ಡಿಜೆಎ-II(ಎಲ್.ಸಿ.ಎ-I)128/2012, ದಿನಾಂಕ 11.09.2023.
3) ಮಾನ್ಯ ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ ತಿದ್ದುಪಡಿ) ನಿಯಮಗಳು 2021.

**ಆನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಆರಂಭಿಕ ದಿನಾಂಕ: 03.05.2024**
**ಹಾಗೂ ಕೊನೆಯ ದಿನಾಂಕ:03.06.2024**

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಖಾಲಿ ಇರುವ **41** ಜವಾನರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಮಂಡ್ಯ ಜಿಲ್ಲಾ ನ್ಯಾಯಾಲಯ ಕಚೇರಿಯ ವೆಬ್ ಸೈಟ್ **https://mandya.dcourts.gov.in/online-recruitment/** ಲಿಂಕ್ ಮೂಲಕ ಆನ್ ಲೈನ್ ನಲ್ಲಿ ದಿನಾಂಕ: **03.05.2024** ರಿಂದ **03.06.2024** ರ ರಾತ್ರಿ **11.59** ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

ಆನ್ ಲೈನ್ ಮೂಲಕ ಅಂದರೆ ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ಯು.ಪಿ.ಐ./ಇಂಟರ್ ನೆಟ್ ಬ್ಯಾಂಕಿಂಗ್ ಇತ್ಯಾದಿ ಆನ್ ಲೈನ್ ಸೇವೆಗಳ ಮೂಲಕ ಶುಲ್ಕವನ್ನು **04.06.2024** ರಂದು ರಾತ್ರಿ **11.59** ರ ವರೆಗೆ ಮಾತ್ರ ಸಲ್ಲಿಸತಕ್ಕದ್ದು.

## 1. **ಜವಾನರುಃ-ಹುದ್ದೆಗಳ ಸಂಖ್ಯೆಃ 41**

**ವೇತನ ಶ್ರೇಣಿಃ** ರೂ.17000-400-18600-450-20400-500-22400-550-24600-600-27000-650-28950 ಹಾಗೂ ಇತರೆ ಭತ್ಯೆಗಳೊಂದಿಗೆ.

**ಹುದ್ದೆಗಳ ವರ್ಗೀಕರಣಃ**

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | 02 | 02 | 02 | 01* | - | - | - | **07** |
| ಸಾಮಾನ್ಯ ಅಭ್ಯರ್ಥಿ | 02 | 07 | 05 | 01* | 01 | 01 | 01 | **18** |
| ಪರಿಶಿಷ್ಟ ಪಂಗಡ | 01 | 01 | 01 | 01* | - | - | - | **04** |
| ಪ್ರವರ್ಗ-1 | 01 | 01 | - | - | - | - | - | **02** |
| ಪ್ರವರ್ಗ-2(ಎ) | 01 | 02 | 02 | 01* | - | - | - | **06** |
| ಪ್ರವರ್ಗ-2(ಬಿ) | 01 | 01 | - | - | - | - | - | **02** |
| ಪ್ರವರ್ಗ-3(ಎ) | 01 | - | - | - | - | - | - | **01** |
| ಪ್ರವರ್ಗ-3(ಬಿ) | 01 | - | - | - | - | - | - | **01** |
| **ಒಟ್ಟು** | **10** | **14** | **10** | **04** | **01** | **01** | **01** | **41** |

* **Blindness and Low Vision.**

## ಶೈಕ್ಷಣಿಕ ವಿದ್ಯಾರ್ಹತೆಃ

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.
- ಕನ್ನಡ ಭಾಷೆಯನ್ನು ಓದಲು ಮತ್ತು ಬರೆಯಲು ತಿಳಿದಿರಬೇಕು.

## ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಗೆ ತತ್ಸಮಾನವಾದ ವಿದ್ಯಾರ್ಹತೆಗಳುಃ

(ಸರ್ಕಾರದ ಸುತ್ತೋಲೆ ಸಂಖ್ಯೆಃ ಸಿಆಸುಇ 81 ಸೇವನೆ 2017, ದಿನಾಂಕಃ 27.02.2018 ರನ್ವಯ ಈ ಕೆಳಕಂಡ ವಿದ್ಯಾರ್ಹತೆಗಳನ್ನು ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಗೆ ತತ್ಸಮಾನವೆಂದು ಪರಿಗಣಿಸಲಾಗುವುದು.)

(1) ಸಿಬಿಎಸ್ ಸಿ ಮತ್ತು ಐಸಿಎಸ್ಇ ಮಂಡಳಿಯು ನಡೆಸುವ ಕ್ಲಾಸ್ 10 ಪರೀಕ್ಷೆ.

(2) ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 10 ಪರೀಕ್ಷೆ.

(3) ನ್ಯಾಷನಲ್ ಇನ್ ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್(ಎನ್.ಐ.ಓ.ಎಸ್.) ವತಿಯಿಂದ ನಡೆಸುವ ಪ್ರೌಢ ಶಿಕ್ಷಣ ಕೋರ್ಸ್.

(4) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್(ಕೆ.ಓ.ಎಸ್.)

## ಆಯ್ಕೆ ವಿಧಾನಃ

- ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2021 ರ ಅನ್ವಯ ನಡೆಸಲಾಗುವುದು.
- 10 ನೇ ತರಗತಿಯ ಗರಿಷ್ಠ ಅಂಕಗಳನ್ನಾಧರಿಸಿ, ಒಂದು ಹುದ್ದೆಗೆ 10 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

## ವಯೋಮಿತಿಃ

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

(a) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

(b) ಗರಿಷ್ಠ ವಯೋಮಿತಿ.

| | |
|---|---|
| ಸಾಮಾನ್ಯ ವರ್ಗ | **35 ವರ್ಷ** |
| 2 ಎ, 2 ಬಿ, 3 ಎ, 3 ಬಿ | **38 ವರ್ಷ** |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 | **40 ವರ್ಷ** |

## ವಯೋಮಿತಿ ಸಡಿಲಿಕೆಃ

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

(1) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಗರಿಷ್ಟ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

(2) ಅಭ್ಯರ್ಥಿಯು ಮಾಜಿ ಸೈನಿಕರಾಗಿದ್ದಲ್ಲಿ, ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

(3) ಅಭ್ಯರ್ಥಿಯು ಅಂಗವಿಕಲರಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕರಾಗಿದ್ದಲ್ಲಿ 10 ವರ್ಷಗಳು.

(4) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ, ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(5) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ, ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(6) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು, ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(7) ಮಾಜಿ ಸೈನಿಕರು, ವಿಧವೆಯರು, ಅಂಗವಿಕಲರು ಮತ್ತು ಜೀತಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರ ಅರ್ಜಿದಾರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದಿರುವ ಪ್ರಮಾಣಪತ್ರಗಳನ್ನು ಸಲ್ಲಿಸಬೇಕು.

- **ನಿಗದಿತ ಅರ್ಜಿ ಶುಲ್ಕ:**

| **ವಿವಿಧ ವರ್ಗೀಕರಣ** | **ಜವಾನರ ಹುದ್ದೆಗೆ** |
|---|---|
| ಸಾಮಾನ್ಯ ವರ್ಗ | **ರೂ.300/-** ಅರ್ಜಿ ಶುಲ್ಕ ಪಾವತಿಸಬೇಕು. |
| ಪ್ರವರ್ಗ 2 ಎ, 2 ಬಿ, 3 ಎ, 3 ಬಿ, ಗೆ ಸೇರಿದ ಅಭ್ಯರ್ಥಿಗಳಿಗೆ | **ರೂ.150/-** ಅರ್ಜಿ ಶುಲ್ಕ ಪಾವತಿಸಬೇಕು. |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಸುವುದರಿಂದ ವಿನಾಯಿತಿ ನೀಡಲಾಗಿದೆ. |

## ಅರ್ಜಿಶುಲ್ಕ ಪಾವತಿಸಬೇಕಾದ ವಿಧಾನ

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್ ಸೈಟ್ https://mandya.dcourts.gov.in/online-recruitment/ ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ on-line payment through net banking/credit card/debit card ಸೌಲಭ್ಯದ ಮೂಲಕ ದಿನಾಂಕಃ **04.06.2024** ರವರೆಗೆ ಪಾವತಿ ಮಾಡಬಹುದಾಗಿದೆ.

**ಇದನ್ನು ಹೊರತುಪಡಿಸಿ ಯಾವುದೇ ಚಲನ್, ಡಿಮ್ಯಾಂಡ್ ಡ್ರಾಫ್ಟ್ , ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

## ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ನ್ಯಾಯಾಲಯದ ಅಧಿಕೃತ ವೆಬ್ ಸೈಟ್ ನಲ್ಲಿ ಅರ್ಜಿಯನ್ನು ಆನ್ ಲೈನ್ ಮೂಲಕ ಸಲ್ಲಿಸಲು ದಿನಾಂಕ:**03.06.2024** ರ ರಾತ್ರಿ **11.59** ರವರೆಗೆ ಅವಕಾಶವಿರುತ್ತದೆ ಮತ್ತು ಶುಲ್ಕವನ್ನು ಪಾವತಿಸಲು ದಿನಾಂಕ:**04.06.2024** ಕಡೆಯ ದಿನಾಂಕವಾಗಿದ್ದು ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.
2. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು, ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.
3. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೆ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
4. ಅಭ್ಯರ್ಥಿಯು ಅರ್ಜಿ ಸಲ್ಲಿಸುವ ಸಮಯದಲ್ಲಿ ನೀಡಿದ ಹುಟ್ಟಿದ ದಿನಾಂಕ, ಶೈಕ್ಷಣಿಕ ವಿದ್ಯಾರ್ಹತೆ, ಮೀಸಲಾತಿ, ವಯೋಮಿತಿ ಸಡಿಲಿಕೆ ಇತ್ಯಾದಿಗಳಿಗೆ ಸಂಬಂಧಿಸಿದಂತೆ ವಿವರಗಳನ್ನು ಮಾತ್ರ ಪರಿಗಣಿಸಲಾಗುವುದು ಇವುಗಳಿಗೆ ಸಂಬಂಧಿಸಿದಂತೆ ಯಾವ ಬದಲಾವಣೆಗಳಿಗೆ ಅವಕಾಶ ಇರುವುದಿಲ್ಲ.
5. ಅಭ್ಯರ್ಥಿಗಳು ವಿವಿಧ ವರ್ಗಗಳಿಗೆ ಒಂದೇ ಅರ್ಜಿಯನ್ನು ಸಲ್ಲಿಸಬೇಕು, ಸದರಿ ಅರ್ಜಿಯಲ್ಲಿಯೇ ಕ್ಲೇಮು ಮಾಡುವ ತಮ್ಮ ಮೀಸಲಾತಿಗಳ ಬಗ್ಗೆ ನಮೂದಿಸತಕ್ಕದ್ದು.

6. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ **SMS** ಅಥವಾ **E-Mail** ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

7. ನಿಗದಿಪಡಿಸಿರುವ ವಿದ್ಯಾರ್ಹತೆಗಳಲ್ಲಿನ ಗರಿಷ್ಠ ಅಂಕಗಳು ಮತ್ತು ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಕಡ್ಡಾಯವಾಗಿ ನಮೂದಿಸುವುದು.

8. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.
   (a) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು, ಅಳತೆಯಲ್ಲಿ **50kb** ಅಳತೆ ಮೀರಿರಬಾರದು ಹಾಗೂ ಅದು **.jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.
   (b) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್ ಲೋಡ್ ಮಾಡಬೇಕು. ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು.
   (c) ಅಭ್ಯರ್ಥಿಯು ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ ಅಪ್ ಲೋಡ್ ಮಾಡಬೇಕು **50kb** ಅಳತೆ ಮೀರಿರಬಾರದು ಹಾಗೂ ಅದು .**jpg** ನಮೂನೆಯಲ್ಲಿರಬೇಕು.

9. ಅಭ್ಯರ್ಥಿಯು **ON-LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಕಡ್ಡಾಯವಾಗಿ ಭರ್ತಿಮಾಡಿ, ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮಕೈಗೊಳ್ಳತಕ್ಕದ್ದು. ನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್ ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

10. ಅರ್ಹ ಅಭ್ಯರ್ಥಿಗಳಿಗೆ **SMS** ಅಥವಾ **E-Mail** ಮುಖಾಂತರ ಮಾಹಿತಿ ನೀಡಲಾಗುವುದು. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲದ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗುವುದು.

11. ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಗಳಿಗೆ ಸಂದರ್ಶನದ ದಿನಾಂಕ ಮತ್ತು ಅವಧಿಯನ್ನು ನ್ಯಾಯಾಲದ ಅಧಿಕೃತ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗುವುದು.

12. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ಗುರುತಿಗಾಗಿ ಚುನಾವಣಾ ಗುರುತಿನ ಪತ್ರ/ಆಧಾರ್ ಕಾರ್ಡ್/ಚಾಲನಾ ಪರವಾನಿಗೆ/ಪಾನ್ ಕಾರ್ಡ್/ಪಾಸ್ ಪೋರ್ಟ್ ಗಳನ್ನು ಸಂದರ್ಶನದ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.

13. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ಮೂಲ ದಾಖಲಾತಿಗಳನ್ನು ಸಂದರ್ಶನದ ವೇಳೆಯಲ್ಲಿ ಪರಿಶೀಲನೆಗಾಗಿ ಈ ಕಛೇರಿಯಲ್ಲಿ ಹಾಜರುಪಡಿಸುವುದು.

(a) ಆನ್ ಲೈನ್ ಅರ್ಜಿಯ ಪ್ರತಿ.

(b) ಶುಲ್ಕ ಪಾವತಿ ರಶೀದಿಯ ಪ್ರತಿ.

(c) ಜನ್ಮ ದಿನಾಂಕ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ / ಜನನ ಪ್ರಮಾಣ ಪತ್ರ.

14. ಆನ್ ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳುಃ**

(1) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ / ಇನ್ಯಾವುದೇ ಅಧೀಕೃತ ದಾಖಲಾತಿಗಳು.

(2) ವಿದ್ಯಾರ್ಹತೆ ಬಗೆಗಿನ ಅಂಕಪಟ್ಟಿಗಳು

(3) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ , ಪ್ರವರ್ಗ-1, ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ), ಪ್ರವರ್ಗ-3(ಬಿ), ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಕರ್ನಾಟಕ ಸರ್ಕಾರವು ನಿಗಧಿಪಡಿಸಿರುವ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರವು ನೀಡಿದ ಪ್ರಮಾಣಪತ್ರವನ್ನು ಸಲ್ಲಿಸಬೇಕು.

(4) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/96/ಸೇನನಿ/2005, ದಿನಾಂಕಃ10.08.2005 ರ ಪ್ರಕಾರ ನಿಗದಿತ ನಮೂನೆ -2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು, ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಕಡ್ಡಾಯವಾಗಿ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು.

(5) ಗ್ರಾಮೀಣ ಮೀಸಲಾತಿಯನ್ನು ಕೋರುವ ಪ.ಜಾತಿ, ಪ.ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ, ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

(6) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು, ನಮೂನೆ-2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

(7) ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ದಿನಾಂಕಃ **19.11.2005** ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣಪತ್ರವನ್ನು ಪಡೆದು ಸಲ್ಲಿಸಬೇಕು.

(8) ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು, ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರವ ಬಗ್ಗೆ ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಕಡ್ಡಾಯವಾಗಿ ಮೇಲು ಸಹಿ ಮಾಡಿಸಿರುವ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣಪತ್ರವನ್ನು ಪಡೆದು ಸಲ್ಲಿಸಬೇಕು.

(9) ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ದಿನಾಂಕ:**27.07.2001** ರ ಸರ್ಕಾರಿ ಆದೇಶ ಸಂಖ್ಯೆ: ಆಸುಇ/44 ಸೇನನಿ/2001 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದ ಪ್ರಮಾಣಪತ್ರವನ್ನು ಸಲ್ಲಿಸಬೇಕು.

(10) ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ಸೈನಿಕ ಸೇವೆಯಿಂದ ಬಿಡುಗಡೆಯಾದ ಅಥವಾ ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರವನ್ನು ಸಲ್ಲಿಸತಕ್ಕದ್ದು.

(11) ಸೇವಾ ನಿರತ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಸದರಿ ಹುದ್ದೆಗೆ ಆಯ್ಕೆಯಾದ ಪಕ್ಷದಲ್ಲಿ, ಆಯ್ಕೆ ಪಟ್ಟಿ ಪ್ರಕಟವಾದ **30** ದಿನಗಳೊಳಗಾಗಿ ಪಡೆಯತಕ್ಕದ್ದು.

(12) ವಿವಿಧ ಮೀಸಲಾತಿ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ಒಳಗಾಗಿ ಸಕ್ಷಮ ಪ್ರಾಧಿಕಾರಗಳು ನೀಅಡಿದ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಹೊಂದಿರತಕ್ಕದ್ದು.

(13) ಅರ್ಹತಾ ಪರೀಕ್ಷೆಯ, ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ, ಜಾತಿ ಮೀಸಲಾತಿ, ಗ್ರಾಮೀಣ ಅಭ್ಯರ್ಥಿ, ಅಂಗವಿಕಲ ಅಭ್ಯರ್ಥಿ, ಕನ್ನಡ ಮಾಧ್ಯಮ ಮೀಸಲಾತಿ ಕೋರಿದ ಅಭ್ಯರ್ಥಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ತಪ್ಪೆಂದು ಕಂಡು ಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ತಪ್ಪು ಮಾಹಿತಿ ನೀಡಿರುವುದು ಕಂಡುಬಂದಲ್ಲಿ ಅವರನ್ನು ಕ್ರಿಮಿನಲ್ ಪ್ರಾಸಿಕ್ಯೂಷನ್ ಗೆ ಗುರಿಪಡಿಸಲಾಗುವುದು.

(14) ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ವರ್ತನೆ/ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಯಿಂದ ಅನರ್ಹಗೊಳಿಸಲಾಗುವುದು.

(15) ಅಭ್ಯರ್ಥಿಗಳು ತಮ್ಮ 10 ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ ಅಥವಾ **CGPA** ಆಗಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗದಿತ ಕಾಲಂನಲ್ಲಿ ನಮೂದಿಸಬೇಕು.

**ಸಹಿ/-**

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ಮಂಡ್ಯ.**